# ಕರ್ನಾಟಕ ಸರ್ಕಾರ
## ಕೃಷಿ ಇಲಾಖೆ

ಸಂ.SFS-5/ಸುತ್ತೋಲೆ/ಮುಂ-20/2020-21

ಕೃಷಿ ಆಯುಕ್ತಾಲಯ,
ಶೇಷಾದ್ರಿ ರಸ್ತೆ, ಬೆಂಗಳೂರು,
ದಿನಾಂಕ 24.04.2020

## ಸುತ್ತೋಲೆ-5

ವಿಷಯ:- 2020ರ ಮುಂಗಾರು ಹಂಗಾಮಿನಲ್ಲಿ ಇಲಾಖಾ ಕಾರ್ಯಕ್ರಮದಲ್ಲಿ ರಿಯಾಯಿತಿ ದರದಲ್ಲಿ ಬಿತ್ತನೆ ಬೀಜ ವಿತರಿಸುವ ಬಗ್ಗೆ.

ಉಲ್ಲೇಖ:- ಈ ಕಛೇರಿಯ ಇದೇ ಸಮ ಸಂಖ್ಯೆಯ ಸುತ್ತೋಲೆಗಳು

*****

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ ಈಗಾಗಲೆ ಒಂದರಿಂದ ಸುತ್ತೋಲೆ ನಾಲ್ಕರವರೆಗು ಸುತ್ತೋಲೆಗಳನ್ನು ನೀಡಲಾಗಿದೆ. ಸುತ್ತೋಲೆ ನಾಲ್ಕರಲ್ಲಿ 2020 ರ ಮುಂಗಾರು ಹಂಗಾಮಿನಲ್ಲಿ ಬೀಜ ವಿತರಣೆಗೆ ಸಂಬಂಧಿಸಿದ ವಿವರವಾದ ಮಾರ್ಗಸೂಚಿಗಳನ್ನು ನೀಡಲಾಗಿದೆ. ಸದರಿ ಮಾರ್ಗಸೂಚಿಗಳಲ್ಲಿ ಪ್ರತಿ ರೈತನಿಗೆ ಈ ಯೋಜನೆಯಡಿ ಒಟ್ಟಾರೆ ಗರಿಷ್ಟ 2.00 ಹೆಕ್ಟೇರ್ ಅಥವಾ ಅವರ ವಾಸ್ತವಿಕ ಹಿಡುವಳಿ (Actual Holding) ಯಾವುದು ಕಡಿಮೆಯೋ ಆ ವಿಸ್ತೀರ್ಣಕ್ಕೆ ಮಾತ್ರ ರಿಯಾಯಿತಿಯಲ್ಲಿ ಬೀಜ ಸರಬರಾಜು ಮಾಡುವುದು ಎಂದು ತಿಳಿಸಲಾಗಿದೆ.

ಆದರೆ ರೈತರಿಗೆ ರಿಯಾಯಿತಿ ದರದಲ್ಲಿ ಬಿತ್ತನೆ ಬೀಜ ವಿತರಿಸುವ ಸಮಯದಲ್ಲಿ **ಒಂದು ಬೆಳೆಯ ಬಿತ್ತನೆ ಬೀಜವನ್ನು ಗರಿಷ್ಠ 3 ಎಕರೆ** ಅಥವಾ ಅವರ ವಾಸ್ತವಿಕ ಹಿಡುವಳಿ (Actual Holding) ಯಾವುದು ಕಡಿಮೆಯೋ ಆ ವಿಸ್ತೀರ್ಣಕ್ಕೆ ಸೀಮಿತಗೊಳಿಸಿ ವಿತರಿಸುವುದು. ಇನ್ನು ಉಳಿದ ಪ್ರದೇಶಕ್ಕೆ ಬೇರೆ ಬೆಳೆಯ ಬಿತ್ತನೆ ಬೀಜವನ್ನು ವಿತರಿಸುವುದು. ಒಬ್ಬ ರೈತನಿಗೆ ಒಟ್ಟಾರೆ ೫ ಎಕರೆವರೆಗೆ ಬಿತ್ತನೆ ಬೀಜ ವಿತರಿಸಬಹುದಾಗಿರುತ್ತದೆ. ಹವಾಮಾನ ವೈಪರೀತ್ಯದಿಂದಾಗಿ ಬೆಳೆ ನಷ್ಟವಾಗುವ ಸಾಧ್ಯತೆ ಹಿನ್ನೆಲೆಯಲ್ಲಿ ಏಕ ಬೆಳೆ ಪದ್ಧತಿಯನ್ನು ಪ್ರೋತ್ಸಾಹಿಸುವ ಬದಲು ಬಹುಬೆಳೆ, ಅಂತರ್ ಬೆಳೆ ಹಾಗು ಮಿಶ್ರಬೆಳೆ ಪದ್ಧತಿಯನ್ನು ಅಳವಡಿಸಿಕೊಳ್ಳಲು ತಿಳುವಳಿಕೆ ನೀಡುವುದರಿಂದ ರೈತರ ಆದಾಯ ಹೆಚ್ಚಿಸಲು ಅನುಕೂಲವಾಗುವುದು. ಕೇಂದ್ರ ಸರ್ಕಾರದ ಬಹು ಮಹತ್ವಾಕಾಂಕ್ಷಿ ರೈತರ ಆದಾಯ ದ್ವಿಗುಣಗುಳಿಸುವ ಪ್ರಯತ್ನವಾಗಿ ಈ ಮೇಲೆ ತಿಳಿಸಿದಂತೆ ಬಿತ್ತನೆ ಬೀಜ ವಿತರಿಸಲು ಕ್ರಮ ವಹಿಸುವುದು.

(ಈ ಸುತ್ತೋಲೆ ಕೃಷಿ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ)

ಕೃಷಿ ನಿರ್ದೇಶಕರು